# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1186 |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿರುವವರು) |
| ಉತ್ತರಿಸುವ ದಿನಾಂಕ | : | 13.03.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 5-6 ವರ್ಷಗಳಿಂದ ಗ್ರಾಮ ಪಂಚಾಯತ್ ಗಳಲ್ಲಿ ನೇಮಕಾತಿ ಆಗದೆ ಇರುವುದರಿಂದ ಉತ್ತರ ಕನ್ನಡ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರ ಪಂಚಾಯಿತಿಗಳಲ್ಲಿ ತಮ್ಮ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ಮಾಡಿಕೊಳ್ಳಲು ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು; | ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ದಿನಾಂಕ:29.09.2020 ಮತ್ತು ಸರ್ಕಾರದ ಅಧಿಸೂಚನೆ ದಿನಾಂಕ: 03.02.2023 ರನ್ವಯ ಬಿಲ್ ಕಲೆಕ್ಟರ್ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್/ ಅಟೆಂಡೆಂಟ್/ ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಪಂಚಾಯತ್ ರಾಜ್ ಆಯುಕ್ತಾಲಯದ ಪತ್ರ ಸಂಖ್ಯೆ: ಕಪಿಆರ್‌ಸಿ-ಜಿಪಿಎ/134/2024, ದಿನಾಂಕ : 26.06.2024 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ, ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕರ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ಮಾಡಲು ಕ್ರಮ ವಹಿಸಲಾಗಿದೆ. |
| (ಆ) | ಗ್ರಾಮ ಪಂಚಾಯತ್‌ಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ; ಯಾವ ಕಾಲಮಿತಿಯೊಳಗೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2025, ದಿನಾಂಕ:27-02-2026 ರಲ್ಲಿನ ಮಾರ್ಗಸೂಚಿಗಳಂತೆ, ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗುವುದು. |

**ಸಂಖ್ಯೆ:** ಗ್ರಾಅಪ 244 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.